ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರುವರಿ, 2021

ವಿಶ್ವವಿದ್ಯಾಲಯಗಳಲ್ಲಿ ವಿದ್ಯಾರ್ಥಿಗಳ ಉತ್ತರ ಪತ್ರಿಕೆಗಳ ಮೇಲಿನ ಅಂಕಗಳನ್ನು ತಿದ್ದಿರುವ ಹಗರಣದ ಬಗ್ಗೆ

ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :-

76 (198) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ವಿಶ್ವವಿದ್ಯಾಲಯಗಳು ವಿದ್ಯಾರ್ಥಿಗಳ ಉತ್ತರ ಪತ್ರಿಕೆಗಳನ್ನು ಸ್ಕ್ಯಾನ್ ಮಾಡಿಕೊಡಲು ಖಾಸಗಿ ಕಂಪನಿಗಳಿಗೆ ಹೊರ ಗುತ್ತಿಗೆ ನೀಡುತ್ತಿರುವುದು ನಿಜವೇ ; (ವಿಶ್ವವಿದ್ಯಾಲಯಗಳ 3 ವರ್ಷಗಳವಾರು ಪ್ರತ್ಯೇಕವಾದ ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಬೆಂಗಳೂರು ವಿಶ್ವವಿದ್ಯಾಲಯ ಪರೀಕ್ಷಾ ಉತ್ತರ ಪತ್ರಿಕೆಗಳ ಸ್ಕ್ಯಾನಿಂಗ್‌ಗಾಗಿ ಖಾಸಗಿ ಕಂಪನಿಗೆ ಹೊರಗುತ್ತಿಗೆ ನೀಡಿದ್ದು ನಿಜವೇ; ಹಾಗಿದ್ದಲ್ಲಿ, ಸಂಸ್ಥೆಯ ಹೆಸರು, ಸ್ಕ್ಯಾನಿಂಗ್ ಮಾಡಲಾದ ಪುಟಗಳ ಸಂಖ್ಯೆ, ಪಾವತಿಸಲಾದ ಹಣ ಕುರಿತಾದ ಸಂಪೂರ್ಣ ಮಾಹಿತಿಯನ್ನು ಪ್ರತ್ಯೇಕವಾಗಿ ಒದಗಿಸುವುದು ;

(ಇ) ಸ್ಕ್ಯಾನಿಂಗ್‌ಗಾಗಿ ಹೊರಗುತ್ತಿಗೆ ಪಡೆಯಲಾದ ಸಂಸ್ಥೆಯು ಅಕ್ರಮದಲ್ಲಿ ಭಾಗಿಯಾಗಿ ವಿದ್ಯಾರ್ಥಿಗಳ ಅಂಕಪಟ್ಟಿಯಲ್ಲಿ ತಿದ್ದುಪಡಿ ಮಾಡಿರುವ ಅಂಶವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ; ಹಾಗಿದ್ದಲ್ಲಿ, ಈ ಅಕ್ರಮದಲ್ಲಿ ಭಾಗಿಯಾದ ವ್ಯಕ್ತಿಗಳು, ಅಧಿಕಾರಿಗಳು/ ಸಿಬ್ಬಂದಿ ಮತ್ತು ಸಂಸ್ಥೆಯ ವಿರುದ್ಧ ಕೈಗೊಂಡ ಕ್ರಮಗಳೇನು ; (ಪ್ರತ್ಯೇಕವಾಗಿ ವಿವರ ಒದಗಿಸುವುದು)

(ಈ) ಮುಂದಿನ ದಿನಗಳಲ್ಲಿ ಈ ರೀತಿಯಾಗಿ ಅಕ್ರಮ ತಡೆಯಲು ಕೈಗೊಂಡ ದೀರ್ಘಾವಧಿ ಕ್ರಮ ಮತ್ತು ಸರ್ಕಾರದ ಆಲೋಚನೆ ಏನು ? (ವಿವರ ಒದಗಿಸುವುದು)